ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಜುಲೈ 19 , 2014

ಪತ್ರಿಕಾ ಪ್ರಕಟಣೆ

# ಮೈಸೂರು ದಸರಾ ಉದ್ಘಾಟನೆಗೆ ಡಾ ಗಿರೀಶ್ ಕಾರ್ನಾಡ್ : ಸಿದ್ಧರಾಮಯ್ಯ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ) :

ವಿಶ್ವ ವಿಖ್ಯಾತ ಮೈಸೂರು ದಸರಾ ಉದ್ಘಾಟನೆಗೆ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ, ಹೆಸರಾಂತ ನಾಟಕಕಾರ ಹಾಗೂ ನಟ ಡಾ ಗಿರೀಶ್ ಕಾರ್ನಾಡ್ ಅವರನ್ನು ಆಹ್ವಾನಿಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರಕಟಿಸಿದರು.

ಮೈಸೂರು ದಸರಾ ಮಹೋತ್ಸವ–2014 ರ ಉನ್ನತ ಮಟ್ಟದ ಸಮಿತಿ ಸಭೆಯ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದರು.

ಸೆಪ್ಟೆಂಬರ್ 25 ರಂದು ನಡೆಯಲಿರುವ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಡಾ ಕಾರ್ನಾಡ್ ಅವರನ್ನು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ವಿ. ಶ್ರೀನಿವಾಸ ಪ್ರಸಾದ್ ಅವರ ನೇತೃತ್ವದ ತಂಡ ಭೇಟಿ ಮಾಡಿ, ಆಮಂತ್ರಣ ನೀಡಲಿದೆ ಎಂದು ಅವರು ತಿಳಿಸಿದರು.

ಮಂಡ್ಯ – ಚಾಮರಾಜನಗರಕ್ಕೂ ವಿಸ್ತರಣೆ

ಈ ಬಾರಿಯ ಮೈಸೂರು ದಸರಾ ಸಂಭ್ರಮವನ್ನು ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳಿಗೂ ವಿಸ್ತರಿಸಲು ಸಮಿತಿ ತೀರ್ಮಾನಿಸಿದೆ ಎಂದು ತಿಳಿಸಿದ ಶ್ರೀ ಸಿದ್ದರಾಮಯ್ಯ ಅವರು ದಸರಾ ಮಹೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಕಾರ್ಯಕಾರಿ ಸಮಿತಿಯನ್ನು ಹಾಗೂ ತಲಾ 25 ಸದಸ್ಯರ 20 ಉಪ ಸಮಿತಿಗಳನ್ನು ರಚಿಸಲಾಗುವುದು. ಅಲ್ಲದೆ, ದಸರಾ ಆಚರಣೆಗೆ 12 ಕೋಟಿ ರೂ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು.

ಪ್ಲಾಸ್ಟಿಕ್ ಮುಕ್ತ ವಲಯ

ದಸರಾ ಸಂಭ್ರಮಕ್ಕೆ ವಿಶೇಷ ಮೆರುಗು ನೀಡಲು ಚಾಮುಂಡಿ ಬೆಟ್ಟದ ಮಾದರಿಯಲ್ಲಿ ಬನ್ನಿಮಂಟಪ, ಅರಮನೆ ಪ್ರಾಂಗಣ, ವಸ್ತು ಪ್ರದರ್ಶನ ಮೈದಾನ, ಜಗನ್ಮೋಹನ ಅರಮನೆ, ಕಲಾ ಗ್ಯಾಲರಿ, ಪ್ರಾಣಿ ಸಂಗ್ರಹಾಲಯ ಪ್ರದೇಶವನ್ನು ಪ್ಲಾಸ್ಟಿಕ್ ಮುಕ್ತ ವಲಯ ಎಂದು ಘೋಷಿಸಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ಉದ್ಘಾಟನಾ ದಿನದಿಂದಲೇ ಮಳಿಗೆ ಪ್ರಾರಂಭಕ್ಕೆ ಸೂಚನೆ

ದಸರಾ ವಸ್ತು ಪ್ರದರ್ಶನ ಮಳಿಗೆಗಳನ್ನು, ವಿಶೇಷವಾಗಿ ಸರ್ಕಾರದ ಇಲಾಖೆಗಳ ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮಳಿಗೆಗಳನ್ನು, ಉದ್ಘಾಟನಾ ದಿನದಿಂದಲೇ ಪ್ರಾರಂಭಿಸಲು ಸಮಿತಿಯು ಅಧಿಕಾರಿಗಳಿಗೆ ಸೂಚಿಸಿತು. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ಕಟ್ಟುನಿಟ್ಟಿನ ನೀಡುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಕೌಶಿಕ್ ಮುಖರ್ಜಿ ಅವರಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಕಾಂಕ್ರಿಟ್ ರಸ್ತೆಯಾಗಿ ಮೆರವಣಿಗೆ ಮಾರ್ಗ

ವಿಶ್ವ ವಿಖ್ಯಾತ ಮೈಸೂರು ದಸರಾದ ವಿಶೇಷ ಆಕರ್ಷಣೆಯಾದ ಜಂಬೂ ಸವಾರಿ ಮೆರವಣಿಗೆಯ ಮಾರ್ಗವನ್ನು ಸಂಪೂರ್ಣವಾಗಿ ಕಾಂಕ್ರೀಟ್ ರಸ್ತೆಯಾಗಿ ಪರಿವರ್ತಿಸಲು ಹಾಗೂ ನಗರದ ಪ್ರಮುಖ ರಸ್ತೆಗಳ ದುರಸ್ತಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಲೋಕೋಪಯೋಗಿ ಇಲಾಖೆ ಹಾಗೂ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಪ್ರವೇಶ ತೆರಿಗೆ ವಿನಾಯಿತಿ

ಮೈಸೂರು ದಸರಾ ಸಂದರ್ಭದಲ್ಲಿ ದೇಶ–ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ವಿವಿಧೆಡೆಗಳಿಂದ ಮೈಸೂರು ನಗರಕ್ಕೆ ಆಗಮಿಸಲಿರುವ ವಾಹನಗಳಿಗೆ ಸೆಪ್ಟೆಂಬರ್ 15 ರಿಂದ ನವೆಂಬರ್ 15 ರ ವರೆಗೆ ಎರಡು ತಿಂಗಳ ಅವಧಿಗೆ ಪ್ರವೇಶ ತೆರಿಗೆ ವಿನಾಯಿತಿ ನೀಡಲು ಸಮಿತಿ ತೀರ್ಮಾನಿಸಿತು.

ಹಲವೆಡೆ ಪ್ರವೇಶಕ್ಕೆ ಒಂದೇ ಟಿಕೆಟ್

ಪ್ರವಾಸಿಗರು ದಸರಾ ಸಂಭ್ರಮವನ್ನು ಸವಿಯಲು ಹಾಗೂ ಎಲ್ಲಾ ಪ್ರವಾಸಿ ತಾಣಗಳಿಗೆ ಭೇಟಿ ನೀಡಲು ಅನುಕೂಲವಾಗುವಂತೆ ಹಲವೆಡೆ ಪ್ರವೇಶಕ್ಕೆ ಈ ಬಾರಿ ಒಂದೇ ಟಿಕೆಟ್ ವ್ಯವಸ್ಥೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಕಂದಾಯ ಸಚಿವ ಶ್ರೀ ವಿ. ಶ್ರೀನಿವಾಸ ಪ್ರಸಾದ್, ಸಹಕಾರ ಸಚಿವ ಶ್ರೀ ಹೆಚ್. ಎಸ್. ಮಹದೇವ ಪ್ರಸಾದ್, ಲೋಕಸಭಾ ಸದಸ್ಯ ಶ್ರೀ ಪ್ರತಾಪ ಸಿಂಹ, ಶಾಸಕರಾದ ಶ್ರೀ ಎಂ. ಕೆ. ಸೋಮಶೇಖರ್, ಶ್ರೀ ತನ್ವೀರ್ ಸೇಠ್, ಶ್ರೀ ಸಿ. ಹೆಚ್. ವಿಜಯ ಶಂಕರ್ ಅವರನ್ನೊಳಗೊಂಡಂತೆ ಗಣ್ಯಾತಿಗಣ್ಯರು, ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಅರವಿಂದ ಜಾಧವ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಡಿ. ಎನ್. ನರಸಿಂಹರಾಜು, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

********

ಡಿ ಪಿ ಎಂ : ಜಿ ಸಿ